# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ


ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.14/ಪಿಆರ್: 19 :2021–22 ದಿನಾಂಕ: 31.07.2021

## ವಾರ್ಡ್ ಸಮಿತಿ ಸಭೆ ನಡವಳಿಗಳು

**ಮಾನ್ಯ ಮುಖ್ಯ ಆಯುಕ್ತರು, ಬಿಬಿಎಂಪಿ ರವರ ಕಛೇರಿ ಆದೇಶ ಸಂಖ್ಯೆ: ಬಿ12(5)/ಪಿ.ಆರ್/35/2020–21, ದಿನಾಂಕ: 16.04.2021ರ ಆದೇಶದಂತೆ ದಿನಾಂಕ: 31.07.2021ರಂದು ನಡೆದ ಬಾಗಲಗುಂಟೆ ವಾರ್ಡ್ ನಂ. 14 ರ ಸಭೆಯ ನಡವಳಿಗಳು:–**

ಸಭೆಗೆ ಹಾಜರಾಗಿದ್ದವರ ವಿವರಗಳು:–

| ಕ್ರ.ಸಂ | ಹೆಸರು ಶ್ರೀಮತಿ / ಶ್ರೀ | ಪದನಾಮ |
|---|---|---|
| 1 | ಶ್ರೀ. ಕೆ. ಮರುಳಸಿದ್ಧಪ್ಪ | ಕಾರ್ಯಪಾಲಕ ಅಭಿಯಂತರರು, ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2 | ಶ್ರೀ. ವೆಂಕಟೇಶಪ್ಪ | ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು, ವಾರ್ಡ್–14 |
| 3 | ಶ್ರೀ. ಡಾ॥ ವರುಣ್ ಕುಮಾರ್ | ಕೋವಿಡ್ ಮೆಡಿಕಲ್ ಆಫೀಸರ್, ಬಾಗಲಗುಂಟೆ ಪ್ರಾಥಮಿಕ ಆರೋಗ್ಯ ಕೇಂದ್ರ |
| 4 | ಶ್ರೀ. ಮೋಹನ್ ಗೌರೋಜಿ | ಹಿರಿಯ ಆರೋಗ್ಯ ನಿರೀಕ್ಷಕರು |
| 5 | ಶ್ರೀಮತಿ. ಚೈತ್ರ.ಎಂ | ಕಿರಿಯ ಆರೋಗ್ಯ ನಿರೀಕ್ಷಕರು |
| 6 | ಶ್ರೀ. ವೆಂಕಟರಮಣಪ್ಪ | ವಾಟರ್ ಇನ್ಸ್ಪೆಕ್ಟರ್, ಬಿಡಬ್ಲ್ಯೂ.ಎಸ್.ಎಸ್.ಬಿ |
| 7 | ಶ್ರೀ. ಮಂಜುನಾಥ್ | ವಾಟರ್ ಇನ್ಸ್ಪೆಕ್ಟರ್, ಬಿಡಬ್ಲ್ಯೂ.ಎಸ್.ಎಸ್.ಬಿ |
| 8 | ಶ್ರೀ. ಕೃಷ್ಣಮೂರ್ತಿ | ಡಿಫೆನ್ಸ್ ಕಾಲೋನಿ, ನಾಗರೀಕ ಹಿತರಕ್ಷಣಾ ಸಮಿತಿ |
| 9 | ಶ್ರೀ, ಸದಾಶಿವ | ನಾಗರೀಕ ಹಿತರಕ್ಷಣಾ ಸಮಿತಿ, ಎಂ.ಇ.ಐ ಬಡಾವಣೆ |
| 10 | ಶ್ರೀ. ರಾಮಪ್ರಸಾದ್, | ಸಿದ್ದೇಶ್ವರ ಬಡಾವಣೆ, ನಾಗರೀಕ ಹಿತರಕ್ಷಣಾ ಸಮಿತಿ. |

ನೋಡಲ್ ಅಧಿಕಾರಿಗಳು, ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು, ಹಾಜರಿದ್ದ ಅಧಿಕಾರಿಗಳನ್ನು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪಧಾದಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

ಈ ಹಿಂದಿನ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ, ಬಾಕಿ ಇರುವ ಕುಂದು ಕೊರತೆಗಳನ್ನು ಆಧ್ಯತೆಯ ಮೇಲೆ ಪೂರೈಸುವಂತೆ ಸಭೆಯಲ್ಲಿ ಹಾಜರಿದ್ದ ಸಂಭಂಧಪಟ್ಟ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.

- **ವಾರ್ಡ್ ವ್ಯಾಪ್ತಿಯಲ್ಲಿನ ಕಾಮಗಾರಿಗಳ ಬಗ್ಗೆ.**
  ವಾರ್ಡ್ ಸಮಿತಿ ಸದಸ್ಯರುಗಳು ವಾರ್ಡ್ ವ್ಯಾಪ್ತಿಯಲ್ಲಿ ಮಂಜೂರಾಗಿರುವ, ಪ್ರಗತಿಯಲ್ಲಿರುವ ಕಾಮಗಾರಿಗಳ ಬಗ್ಗೆ ವಿವರಗಳನ್ನು ಒದಗಿಸುವಂತೆ ಕೋರಿದರು, ಈ ಬಗ್ಗೆ ಸಭೆಯಲ್ಲಿ ವಿವರವಾಗಿ ಚರ್ಚಿಸಿ ಮಂಜೂರಾಗಿರುವ ಕಾಮಗಾರಿಗಳನ್ನು ಆದ್ಯತೆಯ ಮೇಲೆ ಪ್ರಾರಂಭಿಸಲು ಮತ್ತು ಅಪೂರ್ಣ ಕಾಮಗಾರಿಗಳನ್ನು ಶೀಘ್ರವಾಗಿ ಪೂರ್ಣಗೊಳಿಸುವಂತೆ ಸಭೆಯಲ್ಲಿ ಹಾಜರಿದ್ದ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಯಿತು.

**ಕ್ರಮ:** ಸಹಾಯಕ ಅಭಿಯಂತರರು ವಾರ್ಡ್ ನಂ. 14
ಸಹಾಯಕ ಕಾರ್ಯಪಾಲಕ ಅಭಿಯಂತರರು, ದಾಸರಹಳ್ಳಿ ಉ.ವಿ

- **ವಾರ್ಡ್ ವ್ಯಾಪ್ತಿಯಲ್ಲಿನ ಕೋವಿಡ್ ಪ್ರಕರಣಗಳ ಬಗ್ಗೆ:-**

**ವಾರ್ಡ್ ವ್ಯಾಪ್ತಿಯಲ್ಲಿ ಈವರೆಗಿನ ಕೋವಿಡ್ ಪ್ರಕರಣಗಳ ಬಗ್ಗೆ ಹಿರಿಯ ಆರೋಗ್ಯ ಪರಿವೀಕ್ಷಕರು, ಈ ಕೆಳಕಂಡಂತೆ ಮಾಹಿತಿ ಒದಗಿಸಿರುತ್ತಾರೆ.**

1. ಒಟ್ಟು ಪಾಸಿಟಿವ್ ಪ್ರಕರಣಗಳು – 7245
2. ಡಿಸ್ಚಾರ್ಜ್ ಆದ ಪ್ರಕರಣಗಳು – 7085
3. ಸಾವು – 137
4. ಚಾಲ್ತಿಯಲ್ಲಿರುವ ಪ್ರಕರಣಗಳು – 19

ಕೋವಿಡ್ ನಿಯಂತ್ರಣಕ್ಕೆ ಸಂಬಂಧಿಸಿದಂತೆ, ಮಾರ್ಗಸೂಚಿಯಂತೆ ಅಗತ್ಯ ಕ್ರಮ ವಹಿಸುವಂತೆ ಮತ್ತು ನಾಗರೀಕರಲ್ಲಿ ಜಾಗೃತಿ ಮೂಡಿಸಲು ಕ್ರಮ ವಹಿಸುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.

**ಕ್ರಮ:** ಆರೋಗ್ಯ ಪರಿವೀಕ್ಷಕರು / ಆರೋಗ್ಯ ಆದಿಕಾರಿಗಳು,
ಬಾಗಲಗುಂಟೆ ಪ್ರಾಥಮಿಕ ಆರೋಗ್ಯ ಕೇಂದ್ರ

- **ರಸ್ತೆಬದಿ ಚರಂಡಿಗಳಲ್ಲಿ ಹೂಳು ತೆಗೆಯುವ ಬಗ್ಗೆ.**

ವಾರ್ಡ್ ವ್ಯಾಪ್ತಿಯಲ್ಲಿನ ಚರಂಡಿಗಳಲ್ಲಿ ಹೂಳು ತುಂಬಿರುವ ಬಗ್ಗೆ ಹಾಗೂ ತೆರವುಗೊಳಿಸುವ ಬಗ್ಗೆ ವಾರ್ಡ್ ಸಮಿತಿ ಸದಸ್ಯರು ಗಮನ ಸೆಳೆಸರು. ಈ ಬಗ್ಗೆ ವಾರ್ಡ್ ಅಭಿಯಂತರರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಸಿಲ್ಟ್ ಅಂಡ್ ಟ್ರ್ಯಾಕ್ಟರ್‌ನ ಎರಡು ತಂಡಗಳು ಕಾರ್ಯನಿರ್ವಹಿಸುತ್ತಿರುವುದಾಗಿ ತಿಳಿಸಿದರು. ನಗರದಲ್ಲಿ ವ್ಯಾಪಕವಾಗಿ ಮಳೆಯಾಗುತ್ತಿದ್ದು, ತಗ್ಗು ಪ್ರದೇಶಗಳಲ್ಲಿ ಹಾನಿಯುಂಟಾಗುವುದನ್ನು ತಡೆಯಲು ಆದ್ಯತೆಯ ಮೇಲೆ ಚರಂಡಿಗಳಲ್ಲಿನ ಹೂಳು ತೆಗೆಯಲು ಕ್ರಮವಹಿಸುವಂತೆ ಸೂಚಿಸಲಾಯಿತು.

**ಕ್ರಮ:** ಸಹಾಯಕ ಅಭಿಯಂತರರು ವಾರ್ಡ್ ನಂ. 14

- **ಕಸ ವಿಲೇವಾರಿ ಬಗ್ಗೆ.**

ವಾರ್ಡ್ ವ್ಯಾಪ್ತಿಯ ಕೆಲವು ಬಡಾವಣೆಗಳಲ್ಲಿ ಸರಿಯಾಗಿ ಕಸವಿಲೇವಾರಿ ಆಗದ ಬಗ್ಗೆ ಸದಸ್ಯರುಗಳು ತಮ್ಮ ಅಸಮಾಧಾನವನ್ನು ವ್ಯಕ್ತಪಡಿಸಿದರು. ಸಿದ್ದೇಶ್ವರ ಬಡಾವಣೆಯ ಮುಖ್ಯರಸ್ತೆಯಲ್ಲಿ ಎಳನೀರುಚಿಪ್ಪುಗಳನ್ನು ಸರಿಯಾಗಿ ವಿಲೇವಾರಿ ಮಾಡದ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. ಸಂಬಂಧಪಟ್ಟ ಅಧಿಕಾರಿಗಳು ಈ ಬಗ್ಗೆ ಸೂಕ್ತ ಕ್ರಮ ವಹಿಸಿ ವಾರ್ಡ್ ವ್ಯಾಪ್ತಿಯಲ್ಲಿ ಕಸವಿಲೇವಾರಿಯನ್ನು ಪರಿಣಾಮಕಾರಿಯಾಗಿ ನಿರ್ವಹಿಸುವಂತೆ ಸೂಚಿಸಲಾಯಿತು.

**ಕ್ರಮ:** ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 14
ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ)

- **ವಿದ್ಯುತ್ ಕಂಬ ಸ್ಥಳಾಂತರಿಸುವ ಕುರಿತು.**

ಎಂ.ಇ.ಐ ಬಡಾವಣೆಯ ಉದ್ಯಾನವನದ ಹತ್ತಿರ ವಿದ್ಯುತ್ ಕಂಬವು ಶಿಥಲಾವಸ್ಥೆಯಲ್ಲಿದ್ದು, ಸದರಿ ವಿದ್ಯುತ್ ಕಂಬವನ್ನು ಬದಲಾಯಿಸುವಂತೆ ಸದಸ್ಯರುಗಳು ಸಭೆಯ ಗಮನಕ್ಕೆ ತಂದರು. ಸದರಿ ವಿಷಯದ ಬಗ್ಗೆ ವಿಸ್ತೃತವಾಗಿ ಚರ್ಚಿಸಿ ವಾರ್ಡ್ ವ್ಯಾಪ್ತಿಯಲ್ಲಿ ಶಿಥಿಲಾವಸ್ಥೆಯಲ್ಲಿರುವ, ಬಾಗಿರುವ ಹಾಗೂ ಅಪಾಯ ಉಂಟುಮಾಡಬಹುದಾದ ಕಂಬಗಳನ್ನು ಗುರುತಿಸಿ ಬದಲಾಯಿಸುವ / ಸ್ಥಳಾಂತರಿಸುವ ಬಗ್ಗೆ ಸೂಕ್ತ ಕ್ರಮ ವಹಿಸುವಂತೆ, ಬೆಸ್ಕಾಂ ಇಲಾಖೆಯ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಯಿತು.

**ಕ್ರಮ:** ಸಹಾಯಕ ಅಭಿಯಂತರರು /
ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ

- **ವಾರ್ಡ್ ವ್ಯಾಪ್ತಿಯಲ್ಲಿ ಲಸಿಕಾ ಕಾರ್ಯಕ್ರಮದ ಬಗ್ಗೆ.**

ವಾರ್ಡ್‌ವ್ಯಾಪ್ತಿಯಲ್ಲಿ ಲಸಿಕಾ ಕಾರ್ಯಕ್ರಮ ಸರಿಯಾಗಿ ಆಗದೇ ಇರುವ ಬಗ್ಗೆ ಹಾಗೂ ಲಸಿಕಾ ಕಾರ್ಯಕ್ರಮದ ಬಗ್ಗೆ ಮುಂಚಿತವಾಗಿ ಮಾಹಿತಿ ಒದಗಿಸದ ಬಗ್ಗೆ ಸದಸ್ಯರು ಸಭೆಯ ಗಮನ ಸೆಳೆದರು. ತಮ್ಮ ವ್ಯಾಪ್ತಿಗೆ ಹಂಚಿಕೆಯಾಗುವ ಲಸಿಕೆಯನ್ನು ನೀಡುತ್ತಿರುವ ಬಗ್ಗೆ ಮತ್ತು ಲಸಿಕೆ ಹಂಚಿಕೆ ಪ್ರಮಾಣದ ಬಗ್ಗೆ ತಮಗೂ ಸಹ ತಡವಾಗಿ ಮಾಹಿತಿ ಸಿಗುತ್ತಿರುವುದಾಗಿ ಕೋವಿಡ್ ಮೆಡಿಕಲ್ ಆಫೀಸರ್‌ರವರು ತಿಳಿಸಿದರು. ಈ ಬಗ್ಗೆ ವಿಸ್ತೃತವಾಗಿ ಚರ್ಚಿಸಿ ವಾರ್ಡ್‌ವ್ಯಾಪ್ತಿಯಲ್ಲಿನ ದೈನಂದಿನ ಲಸಿಕಾ ಕಾರ್ಯಕ್ರಮದ ಮಾಹಿತಿಯನ್ನು ವಾಟ್ಸ್‌ಆಪ್ ಗ್ರೂಪ್‌ನಲ್ಲಿ ತಿಳಿಸುವಂತೆ ಸೂಚಿಸಲಾಯಿತು.

ಕ್ರಮ: ಕೋವಿಡ್ ಮೆಡಿಕಲ್ ಆಫೀಸರ್/ಆರೋಗ್ಯ
ವೈದ್ಯಾಧಿಕಾರಿಗಳು ಬಾಗಲಗುಂಟೆ

31/07/2021      31/07/2021

| | |
|---|---|
| ಸದಸ್ಯ ಕಾರ್ಯದರ್ಶಿ | ನೋಡಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ |
| ಹಾಗೂ ಸಹಾಯಕ ಅಭಿಯಂತರರು | ಅಧ್ಯಕ್ಷರು, ವಾ.ನಂ.14, ಬಾಗಲಗುಂಟೆ |
| ವಾರ್ಡ್ ನಂ. 14, ಬಾಗಲಗುಂಟೆ | ಮತ್ತು ಕಾರ್ಯಪಾಲಕ ಅಭಿಯಂತರರು |
| ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ |

**ಅಧಿಕಾರಿಗಳ / ಸದಸ್ಯರುಗಳ ಮಾಹಿತಿಗಾಗಿ:-**

1) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿ.ಬಿ.ಎಂ.ಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
2) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
3) ಅಧೀಕ್ಷಕ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
4) ಆರೋಗ್ಯ ವೈದ್ಯಾಧಿಕಾರಿಗಳು (ದಾಸರಹಳ್ಳಿ) ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
5) ವಲಯ ಅರಣ್ಯಾಧಿಕಾರಿಗಳು, ದಾಸರಹಳ್ಳಿ ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
6) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
7) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ
8) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಮಾಹಿತಿಗಾಗಿ.
10) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮಾಹಿತಿಗಾಗಿ.
11) ಕೋವಿಡ್ ಮೆಡಿಕಲ್ ಆಫೀಸರ್, ಬಾಗಲಗುಂಟೆ ಪ್ರಾಥಮಿಕ ಆರೋಗ್ಯ ಕೇಂದ್ರ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
12) ಹಿರಿಯ / ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 14 ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
13) ವಾರ್ಡ್ ಸಮಿತಿ ಸದಸ್ಯರುಗಳಿಗೆ ಮಾಹಿತಿಗಾಗಿ.
14) ಕಛೇರಿ ಪ್ರತಿ.

O/C